ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT: [illegible]

ಪತ್ರಿಕೆಯ ಹೆಸರು : NAME OF THE NEWS PAPER: ಕನ್ನಡಪ್ರಭ

ದಿನಾಂಕ : DATE : 12/12/20

# ಸಭಾಪತಿ ಪದಚ್ಯುತಿಗೆ ಡಿ.15ರ ಮುಹೂರ್ತ?

## ಸದನ ಮುಂದೂಡಿಕೆ ವಿರುದ್ಧ ಗೌರ್ನರ್‌ಗೆ ಬಿಜೆಪಿ ದೂರು । 15ಕ್ಕೆ ಸದನ ನಡೆಸಲು ಸೂಚನೆ

## ಪ್ರತಾಪ್‌ಚಂದ್ರ ಶೆಟ್ಟಿ ಸದನ ನಡೆಸುತ್ತಾರಾ? । ಈಗ ಕುತೂಹಲ ಕೆರಳಿಸಿದೆ ಸಭಾಪತಿ ನಡೆ

• **ಕನ್ನಡಪ್ರಭ ವಾರ್ತೆ** ಬೆಂಗಳೂರು

ವಿಧಾನಪರಿಷತ್ ಸಭಾಪತಿ ಪ್ರತಾಪ್‌ಚಂದ್ರ ಶೆಟ್ಟಿ ವಿರುದ್ಧದ ಅವಿಶ್ವಾಸ ಬಗ್ಗೆ ಚರ್ಚೆ ಸಂಬಂಧ ಆಡಳಿತಾರೂಢ ಬಿಜೆಪಿ ಸದಸ್ಯರು ಶುಕ್ರವಾರ ರಾಜ್ಯಪಾಲರ ಮೊರೆ ಹೋಗಿದ್ದಾರೆ. ಇದರ ಬೆನ್ನಲ್ಲೇ ಈ ತಿಂಗಳ 15ಕ್ಕೆ ಕಲಾಪ ನಡೆಸುವಂತೆ ಸರ್ಕಾರ ನಿರ್ದೇಶನ ನೀಡಿದೆ. ಈ ಸಂಬಂಧ ಸಂಸದೀಯ ಇಲಾಖೆ ಕಾರ್ಯದರ್ಶಿಗಳು, ಪರಿಷತ್ತಿನ ಕಾರ್ಯದರ್ಶಿಗಳಿಗೆ ಪತ್ರ ಬರೆದು ಸೂಚನೆ ಕೊಟ್ಟಿದ್ದಾರೆ. ಸರ್ಕಾರ ನಿಗದಿ ಮಾಡಿದ ಕಾರ್ಯಕಲಾಪ ಗಳಂತೆ ಈ ತಿಂಗಳ 15ರವರೆಗೆ ಪರಿಷತ್ತಿನ ಕಲಾಪ ನಡೆಸಬೇಕಿತ್ತು.



ಕಲಾಪ ಸಲಹಾ ಸಮಿತಿಯಲ್ಲಿ ಯಾವುದೇ ನಿರ್ಣಯ ಕೈಗೊಳ್ಳದೇ ಇರುವುದರಿಂದ 15ರ ವರೆಗೆ ಮುಂದುವರೆಸಬೇಕು. ಒಂದು ವೇಳೆ ಸದಸ್ಯರು ಬೆಂಗಳೂರಿನಿಂದ ದೂರ ಹೋಗಿದ್ದಲ್ಲಿ (ತಮ್ಮ ಕ್ಷೇತ್ರಕ್ಕೆ) ಕೊನೆ ಪಕ್ಷ 15ರಂದು ಬೆಳಗ್ಗೆ 11 ಗಂಟೆಗೆ ಸಭೆ ಕರೆದು ನಿಯಮಾವಳಿಗಳಂತೆ ಚರ್ಚಿಸಲು ಅನುವು ಮಾಡಿಕೊಡಬೇಕು ಎಂದು ಸೂಚಿಸಲಾಗಿದೆ.

ಈ ಸೂಚನೆ ಬೆನ್ನಲ್ಲೇ ಸಭಾಪತಿ ಶೆಟ್ಟಿ ಅವರು ಪರಿಷತ್ತಿನ ಅಧಿಕಾರಿಗಳನ್ನು ಕರೆದು ಸಮಾಲೋಚನೆ ನಡೆಸಿದ್ದಾರೆ. ಸರ್ಕಾರ ನೀಡಿದ ಸೂಚನೆಯನ್ನು ಪಾಲಿಸುತ್ತಾರೋ ಅಥವಾ ಇಲ್ಲವೋ ಎಂಬುದರ ಬಗ್ಗೆ ಶನಿವಾರ ಸ್ಪಷ್ಟ ಚಿತ್ರಣ ಹೊರ ಬೀಳುವ ನಿರೀಕ್ಷೆಯಿದೆ. ಒಂದು ವೇಳೆ ಮಂಗಳವಾರ ಕಲಾಪ ನಡೆಸದಿದ್ದರೆ ಸರ್ಕಾರ ಮತ್ತು ಸಭಾಪತಿಗಳ ಮಧ್ಯೆ ತಿಕ್ಕಾಟ ಏರ್ಪಟ್ಟು ರಾಜ್ಯಪಾಲರು ನೇರವಾಗಿ ಮಧ್ಯೆ ಪ್ರವೇಶ ಮಾಡುವ ಸನ್ನಿವೇಶ ಸೃಷ್ಟಿಯಾಗಬಹುದು ಎನ್ನಲಾಗಿದೆ. ಅವಿಶ್ವಾಸ ನಿರ್ಣಯದ ಬಗ್ಗೆ ಚರ್ಚೆ ಕೈಗೆತ್ತಿಕೊಳ್ಳಬೇಕಾದೀತು ಎಂಬ ಕಾರಣಕ್ಕಾಗಿಯೇ ಸಭಾಪತಿಗಳು ಸದನವನ್ನು ಏಕ ಪಕ್ಷೀಯವಾಗಿ ಅನಿರ್ದಿಷ್ಟಾವಧಿಗೆ ಮುಂದೂಡಿದ್ದಾರೆ ಎಂದು ಬಿಜೆಪಿ ಆಪಾದಿಸಿದೆ.

**ರಾಜ್ಯಪಾಲಗೆ ಬಿಜೆಪಿ ದೂರು:** ಈ ನಡುವೆ ಶುಕ್ರವಾರ ಬೆಳಗ್ಗೆ ಪರಿಷತ್ತಿನ ಬಿಜೆಪಿ ಸದಸ್ಯರು ರಾಜಭವನಕ್ಕೆ ತೆರಳಿ ರಾಜ್ಯಪಾಲ ವಜುಭಾಯಿ ವಾಲಾ ಅವರಿಗೆ ಸಭಾಪತಿಗಳ ನಡೆ ಬಗ್ಗೆ ದೂರು ಸಲ್ಲಿಸಿದರು. ಗುರುವಾರ ಸಂಜೆ ಕಲಾಪ ಮುಂದೂಡಿದ ಬೆನ್ನಲ್ಲೇ ಪರಿಷತ್ತಿನ ಸದಸ್ಯರೂ ಆಗಿರುವ ಉಪಮುಖ್ಯಮಂತ್ರಿ ಲಕ್ಷ್ಮಣ ಸವದಿ, ಮುಖ್ಯ ಸಚೇತಕ ಮಹಾಂತೇಶ್ ಕವಟಗಿಮಠ ರಾಜ್ಯಪಾಲರನ್ನು ಭೇಟಿ ಮಾಡಿ ದೂರಿದ್ದರು. ಶುಕ್ರವಾರ ಪರಿಷತ್ತಿನ ಸಭಾನಾಯಕರೂ ಆಗಿರುವ ಸಚಿವ ಕೋಟ ಶ್ರೀನಿವಾಸ ಪೂಜಾರಿ ಅವರ ನೇತೃತ್ವದಲ್ಲಿ ಹಲವು ಸದಸ್ಯರು ರಾಜ್ಯಪಾಲರನ್ನು ಭೇಟಿ ಮಾಡಿದರು. ವಾಸ್ತವವಾಗಿ ಬಿಜೆಪಿಯ ಎಲ್ಲ ಸದಸ್ಯರೂ ರಾಜಭವನಕ್ಕೆ ತೆರಳಲು ಉದ್ದೇಶಿಸಿದ್ದರು. ಆದರೆ, ಕೋವಿಡ್ ಕಾರಣಕ್ಕಾಗಿ ಕೇವಲ ಐದು ಮಂದಿ ಸದಸ್ಯರಿಗೆ ಮಾತ್ರ ಅವಕಾಶ ನೀಡಲಾಯಿತು. ಪೂಜಾರಿ ಜೊತೆಗೆ ಸರ್ಕಾರದ ಮುಖ್ಯ ಸಚೇತಕ ಮಹಾಂತೇಶ್ ಕವಟಗಿಮಠ, ಸದಸ್ಯರಾದ ಎನ್. ರವಿಕುಮಾರ್, ಆಯನೂರು ಮಂಜುನಾಥ್ ಹಾಗೂ ತೇಜಸ್ವಿನಿ ಗೌಡ ನಿಯೋಗದಲ್ಲಿದ್ದರು.

ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಸಚಿವ ಪೂಜಾರಿ, 'ವಿಧಾನಪರಿಷತ್ ಕಲಾಪ ಕರೆಯಲು ರಾಜ್ಯಪಾಲರಿಗೆ ಮನವಿ ಮಾಡಿದ್ದೇವೆ. ಸದಸ್ಯರ ಭಾವನೆಗೆ ವಿರುದ್ಧವಾಗಿ ಕಲಾಪ ಮುಂದೂಡಿರುವ ಬಗ್ಗೆ ರಾಜ್ಯಪಾಲರಿಗೆ ಮಾಹಿತಿ ನೀಡಿದ್ದೇವೆ ಎಂದು ತಿಳಿಸಿದರು.